**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2022-23 ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದ ಕಂಡಿಕೆ 203ರಲ್ಲಿ ಘೋಷಿಸಿರುವ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:**
1. ಮಾನ್ಯ ಮುಖ್ಯಮಂತ್ರಿಯವರ ಆಯವ್ಯಯ ಭಾಷಣದ ಕಂಡಿಕೆ 203 ರಲ್ಲಿ ಘೋಷಿಸಿರುವ ಕುರಿತು.
2. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 279 ವೆಚ್ಚ-9/2022, ದಿ: 08-04-2022
3. ಯೋಜನಾ ಇಲಾಖೆಯ ಆದೇಶ ಸಂ: ಪಿಡಿಎಸ್/38/ಎಂಇಡಿ/2022, ದಿ:08-04-2022

*******

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಮಾನ್ಯ ಮುಖ್ಯಮಂತ್ರಿಗಳು 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 203 ರಲ್ಲಿ"2021-22 ರ ಅವಧಿಯಲ್ಲಿ ಒಂದು ಲಕ್ಷ ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿಯನ್ನು ನೀಡಲಾಗಿದ್ದು, 25,000 ಅಭ್ಯರ್ಥಿಗಳಿಗೆ ನೇರ ಉದ್ಯೋಗ ಒದಗಿಸಲಾಗಿದೆ. 2022-23 ರ ಅವಧಿಯಲ್ಲಿ 2.50 ಲಕ್ಷ ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿ ನೀಡಲಾಗುವುದು" ಎಂದು ಘೋಷಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ 2022-23ನೇ ಸಾಲಿನಲ್ಲಿ ಆಯವ್ಯಯ ಭಾಷಣದಲ್ಲಿ ಘೋಷಿಸಿರುವ 2.50 ಲಕ್ಷ ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿ ನೀಡುವ ಗುರಿಯ ಪೈಕಿ ಒಟ್ಟು 85,909 ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿ ನೀಡಲು ಅನುದಾನದ ಲಭ್ಯತೆ ಇದ್ದು, ಇನ್ನುಳಿದ 1,64,091 ಅಭ್ಯರ್ಥಿಗಳಿಗೆ ಕೌಶಲ್ಯಾಭಿವೃದ್ಧಿ ಮಿಷನ್ ಯೋಜನೆಯ ಮೂಲಕ ಕೌಶಲ್ಯ ತರಬೇತಿ ನೀಡಲು ಪ್ರತಿ ಅಭ್ಯರ್ಥಿಗಳಿಗೆ ರೂ.15000/- ರಂತೆ ಒಟ್ಟು ರೂ.246.14 ಕೋಟಿಗಳ ಹೆಚ್ಚುವರಿ ಅನುದಾನದ ಅವಶ್ಯಕತೆ ಇರುತ್ತದೆ.

ಅದರಂತೆ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 38 ಕೌಗುಇ 2022, ಬೆಂಗಳೂರು ದಿನಾಂಕ: 12-04-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಆಯವ್ಯಯ ಭಾಷಣದ ಕಂಡಿಕೆ 203 ರಲ್ಲಿ"2021-22 ರ ಅವಧಿಯಲ್ಲಿ ಈಗಾಗಲೇ ಒಂದು ಲಕ್ಷ ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿಯನ್ನು ನೀಡಲಾಗಿದ್ದು, 25,000 ಅಭ್ಯರ್ಥಿಗಳಿಗೆ ನೇರ ಉದ್ಯೋಗ ಒದಗಿಸಲಾಗಿದೆ. 2022-23 ರ ಅವಧಿಯಲ್ಲಿ 2.50 ಲಕ್ಷ ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿ ನೀಡಲಾಗುವುದು ಎಂದು ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವುದರಿಂದ, ಸದರಿ ಯೋಜನೆಯನ್ನು 2022-23 ನೇ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಿರುವ ಅನುದಾನದಿಂದ ಪ್ರಾರಂಭಿಸಿ ಹಾಗೂ ಹೆಚ್ಚುವರಿ ಗುರಿಯನ್ನು ಹಂತ ಹಂತವಾಗಿ ಯೋಜನೆಯನ್ನು ಅನುಷ್ಠಾನಗೊಳಿಸಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 279 ವೆಚ್ಚ-9/2022, ಹಾಗೂ ಯೋಜನಾ ಇಲಾಖೆಯ ಆದೇಶ ಸಂ: ಪಿಡಿಎಸ್/38/ಎಂಇಡಿ/2022, ದಿ: 08-04-2022 ರಲ್ಲಿನ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

12/04/2022

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

**ಇವರಿಗೆ:-**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಿ 10 ಪ್ರತಿಗಳನ್ನು ಸರಬರಾಜು ಮಾಡಲು ಕೋರಿದೆ.

1. ಮಹಾಲೇಖಪಾಲರು (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್.ಎ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕೌಶಲ್ಯ ಮಿಷನ್ (ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ) (ಕೆ.ಎಸ್.ಡಿ.ಸಿ) ಕೌಶಲ್ಯ ಭವನ, ಬೆಂಗಳೂರು.
4. ಖಜಾನಾಧಿಕಾರಿ, ರಾಜ್ಯಹುಜೂರ್ ಖಜಾನೆ, ಬೆಂಗಳೂರು.
5. ಉಪ ನಿರ್ದೇಶಕರು, ಖಜಾನೆ ಎನ್.ಎಂ.ಸಿ., ಖನಿಜ ಭವನ, ರೇಸ್‌ಕೋರ್ಸ್ ರೋಡ್, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3&9), ವಿಧಾನಸೌಧ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಉನ್ನತ ಶಿಕ್ಷಣ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿ ಕಟ್ಟಡಗಳ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿ ಕಟ್ಟಡಗಳ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿ ಕಟ್ಟಡಗಳ, ಬೆಂಗಳೂರು.
5. ಅಧೀಕ್ಷರು, ಶಾಖೆ-1 ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
6. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.